ಭಾಗ್ಯನಗರ ಪಟ್ಟಣ ಪಂಚಾಯತಿಯಿಂದ ಸ್ವೀಪ್ ಜಾಗೃತಿ ಜಾಥಾ

ಕೊಪ್ಪಳ ಏಪ್ರಿಲ್ 16: ಲೋಕಸಭಾ ಸಾರ್ವತ್ರಿಕ ಚುನಾವಣೆ ನಮಿತ್ಯ ಮತದಾನ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಭಾಗ್ಯನಗರ ಪಟ್ಟಣ ಪಂಚಾಯತಿಯಿಂದ ಮಂಗಳವಾರದಂದು ಮತದಾನ ಜಾಗೃತಿ ಜಾಥಾ ಜರುಗಿತು.

ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ 64–ಕೊಪ್ಪಳ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಅನ್ನಪೂರ್ಣ ಮುದಕ್ಕಮ್ಮನವರ ಅವರು, ಮೇ–7ರಂದು ಜರುಗುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶವನ್ನಾಗಿ ನರ್ಮಿಸೋಣ. ಮತದಾನ ದಿನದಂದು ಚುನಾವಣೆ ಆಯೋಗ ನಗದಿಪಡಿಸಿದ ದಾಖಲಾತಿಗಳನ್ನು ತೆಗೆದುಕೊಂಡು ಹೋಗಿ ನಮಗೆ ಸೂಕ್ತ ಎನಸುವ ವ್ಯಕ್ತಿಗೆ ಮತ ಚಲಾಯಿಸಬೇಕು. ಕಾರ್ಖಾನೆಯ ಎಲ್ಲಾ ಮತದಾರರು ಚಾಚೂ ತಪ್ಪದೇ ಮತದಾನ ಮಾಡಿ ಇತರರಿಗೆ ಮಾದರಿಯಾಗಬೇಕೆಂದು ಕರೆ ನೀಡಿದರು. ಮತದಾನ ಪವಿತ್ರವಾದ ಕಾರ್ಯ. ನಮ್ಮ ಕುಟುಂಬದ 18 ವರ್ಷ ಮೇಲ್ಪಟ್ಟ ಸದಸ್ಯರು ಮತ ಚಲಾಯಿಸುವ ಮೂಲಕ ದೇಶಕ್ಕೆ ಸುಭದ್ರ ಆಡಳಿತ ಒದಗಿಸಲು ಕೈ ಜೋಡಿಸೋಣ ಎಂದರು. ಸ್ವೀಪ್ ಕಾರ್ಯಕ್ರಮದ ಜಾಥಾವು ಶಾಂತಿನಿಕೇತನ ಶಾಲೆಯಿಂದ ಆರಂಭವಾಗಿ ಎಫ್‌ಸಿಐ ಗೋದಾಮು, ಪ್ರಗತಿ ನಗರ, ಅಡವಿ ಆಂಜನೇಯ ದೇವಸ್ಥಾನ ಮಾರ್ಗವಾಗಿ ಪಟ್ಟಣ ಪಂಚಾಯತಿಯವರೆಗೆ ನಮ್ಮ ಧ್ವನಿ, ನಮ್ಮ ಮತ, ನಮ್ಮ ಮತ ನಮ್ಮ ಹಕ್ಕು, ನಮ್ಮ ಓಟು ನಮ್ಮ ಪವರ್, ನಮ್ಮ ಮತ ನಮ್ಮ ಆಯ್ಕೆ ಇತ್ಯಾದಿ ಕುರಿತು ಬಟಿಂಗ್ಸ್ ನಲ್ಲಿರುವ ಘೋಷಣೆಗಳೊಂದಿಗೆ ಸಾಗಿ ಮುಕ್ತಾಯಗೊಂಡಿತು. ನಂತರ ಕಡ್ಡಾಯ ಮತದಾನ ಮಾಡಲು ಎಲ್ಲಾ ನೌಕರರು, ಕಾರ್ಮಿಕರಿಗೆ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಜಾಥಾದಲ್ಲಿ 120 ಕ್ಕೂ ಹೆಚ್ಚು ನೌಕರರು, ಕಾರ್ಮಿಕರು ಮತದಾನ ಮಾಡುವಂತೆ ಮನವೊಲಿಸಿದರು. ಕಾರ್ಯಕ್ರಮದಲ್ಲಿ ತಾಲೂಕ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸುರೇಶ ಬಬಲಾದ, ತಾಲೂಕ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹನಮಂತಪ್ಪ, ತಾಲೂಕ ಯೋಜನಾಧಿಕಾರಿ ರಾಜೇಸಾಬ್ ನದಾಫ್, ತಾಲೂಕ ಸ್ವೀಪ್ ಸಮಿತಿ ಸದಸ್ಯರಾದ ಬಸವರಾಜ ಬಳಿಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಟ್ಟಣ ಪಂಚಾಯತಿಯ ನೌಕರರು, ಸಿಬ್ಬಂದಿಗಳು, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಪಟ್ಟಣ ಪಂಚಾಯತಿಯ ಪೌರ ಕಾರ್ಮಿಕರು ಹಾಜರಿದ್ದರು.

ಸತ್ತಿಗೇರಿಯಲ್ಲಿ ಗ್ರಾಮದೇವಿ ಜಾತ್ರಾ ಮಹೋತ್ಸವ

ಯರಗಟ್ಟಿ:ಸಮೀಪದ ಸತ್ತಿಗೇರಿ ಗ್ರಾಮದಲ್ಲಿ ದ್ಯಾಮವ್ವಾದೇವಿ ಜಾತ್ರೆಯ ಸಡಗರ ಸಂಭ್ರಮ ಮನೆ ಮಾಡಿದೆ. 5 ವರ್ಷಗಳ ನಂತರ ನಡೆಯುತ್ತಿರುವ ವಿಶೇಷ ಜಾತ್ರೆಯ ಸವಿಗಳಿಗೆಯಲ್ಲಿ ಅಬಾಲವೃದ್ಧರಾಗಿ ಎಲ್ಲರೂ ಮಿಂದೇಳುತ್ತಿದ್ದಾರೆ. ಅಲ್ಲದೇ ಸತ್ತಿಗೇರಿ ಗ್ರಾಮ ಸಂಪೂರ್ಣ ಶೃಂಗಾರಗೊಂಡಿದ್ದು, ಬೀಗರು, ಸಂಬಂಧಿಕರು, ಉದ್ಯೋಗ ಆರಿಸಿ ಹೋದವರು, ಮಿತ್ರರು ಪರಿಚಯಿಸ್ಥರು, ಎಲ್ಲರೂ ಮತ್ತೆ ಊರ ಕಡೆಗೆ ಮುಖ ಮಾಡಿದ್ದು ಪರಸ್ಪರ ಕುಶಲೋಪರಿ ಹಂಚಿಕೊಳ್ಳುತ್ತಿರುವ ದೃಶ್ಯ ಗ್ರಾಮದಲ್ಲಿ ಸಾಮಾನ್ಯವಾಗಿದೆ.

ಜಾತ್ರೆ ಆರಂಭವಾಗಿ 3 ದಿವಸಗಳ ಕಳೆದರೂ ಸಡಗರ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಭಕ್ತರ ದಂಡು ನಿತ್ಯ ಸಾವಿರಾರೂ ಸಂಖ್ಯೆಯಲ್ಲಿ ಬಂದು ದೇವಿಗೆ ಉಡಿ ತುಂಬಿ ಹರಕೆ ಹರಿಸುವಂತೆ ಬೇಡುತ್ತಿದ್ದಾರೆ.

ಗ್ರಾಮದಲ್ಲಿ ದೇವಿ ಹೊನ್ನಾಟವಾಡುತ್ತಾ ಮನೆ ಮನೆಯಲ್ಲಿ ಉಡಿ ತುಂಬಿಸಿಕೊಳ್ಳುವ ಕಾರ್ಯಕ್ರಮ ಅದ್ದೂರಿಯಿಂದ ನಡೆಯುತ್ತಿರುವ ದೃಶ್ಯವನ್ನು ಜನ ಕಣ್ಣತುಂಬಿಕೊಂಡರು.

ಆರೋಗ್ಯ ಇಲಾಖೆಯಿಂದ ಹಕ್ಕಿ–ಪಿಕ್ಕಿ ಸಮುದಾಯದವರಿಗೆ ಮತದಾನ ಜಾಗೃತಿ ಕಾರ್ಯಕ್ರಮ

ಕೊಪ್ಪಳ ಏಪ್ರಿಲ್ 15 : ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರದಂದು ಕೊಪ್ಪಳ ನಗರ ಪ್ರದೇಶದ 12ನೇ ವಾರ್ಡಿನ ಕೊಟಗೇರಾ ಕಾಲೋನಿಯಲ್ಲಿ ಹಕ್ಕಿ–ಪಿಕ್ಕಿ ಸಮುದಾಯದ ಜನಾಂಗದವರಿಗೆ ಮತದಾನ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಸಮುದಾಯದ ಭವಿಷ್ಯಕ್ಕಾಗಿ ಪತ್ರಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು. 18ನೇ ಲೋಕಸಭಾ ಚುನಾವಣೆ ಕರ್ನಾಟಕದಲ್ಲಿ 02 ಹಂತದಲ್ಲಿ ನಡೆಯಲಿದ್ದು, ನಮ್ಮ ಕೊಪ್ಪಳ ಲೋಕಸಭಾ ಕ್ಷೇತ್ರದ ಚುನಾವಣೆ ಮೇ 07 ರಂದು ನಡೆಯಲಿದೆ. ಅಂದು ತಮ್ಮ ವಾರ್ಡಿಗೆ ನಗದಿ ಪಡಿಸಿದ ಮತಗಟ್ಟೆಗೆ ಹೋಗಿ ಕಡ್ಡಾಯವಾಗಿ ಎಲ್ಲರೂ ಮತದಾನ ಮಾಡಿ, ಸುಭದ್ರ ಸರ್ಕಾರ ರಚಿಸಲು ಸಹಕರಿಸಬೇಕು. ಭಾರತ ಪ್ರಜಾಪ್ರಭುತ್ವದ ದೇಶವಾಗಿದೆ. ನಮ್ಮ ವಾರ್ಡ್ ಎಲ್ಲಾ ರೀತಿಯಿಂದ ಅಭಿವೃದ್ಧಿಯಾಗಬೇಕಾದರೆ ಉತ್ತಮ ನಾಯಕನ ಆಯ್ಕೆ ಮಾಡುವುದು ನಮ್ಮ ಕೈಯಲ್ಲಿದೆ. "ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ" ಎಂಬ ಘೋಷವಾಕ್ಯದೊಂದಿಗೆ ಮೇ–07 ರ ಚುನಾಚಣೆ ದಿನದಂದು ಯಾವುದೇ ಮತದಾರ ಮತದಾನದಿಂದ ಹೊರಗುಳಿಯದಂತೆ, ಇತರರಿಗೂ ಅರಿವು ಮೂಡಿಸಿ, ಮತದಾನ ಮಾಡಬೇಕು ಮತ್ತು ಮಾಡಿಸಬೇಕು. ಸದೃಢ ಪ್ರಜಾಪ್ರಭುತ್ವಕ್ಕಾಗಿ ಮತದಾರರ ಸಾಕ್ಷರತೆ ಎಂಬ ಅಂಶವನ್ನು ಆಧಾರವಾಗಿ ಇಟ್ಟುಕೊಂಡು ಮತದಾನ ಮಾಡುವಂತೆ ಹಕ್ಕಿ–ಪಿಕ್ಕಿ ಸಮುದಾಯದ ಮುಂಖಡರಿಗೆ ತಿಳಿಸಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ. ಅವರು ಮಾತನಾಡಿ, ಚುನಾವಣೆ ಪರ್ವ, ದೇಶದ ಗರ್ವ ಮತದಾನ ದಿನದಂದು ನಾವೆಲ್ಲರೂ ಹಬ್ಬದಂತೆ ಸಂಭ್ರಮಿಸಬೇಕು. 18 ವರ್ಷ ಮೇಲ್ಪಟ್ಟವರೆಲ್ಲರೂ ಮತದಾನದ ಪಟ್ಟಿಯಲ್ಲಿ ತಮ್ಮ ಹೆಸರನ್ನು ಖಾತ್ರಿ ಪಡಿಸಿಕೊಂಡು, ತಪ್ಪದೇ ಮತದಾನ ಮಾಡಬೇಕು. 85 ವರ್ಷ ಮೇಲ್ಪಟ್ಟ ವೃದ್ಧರಿಗೆ ಹಾಗೂ ವಿಶೇಷ ಚೇತನರಿಗೆ ಮನೆಗೆ ಬಂದು ಮತದಾನ ಮಾಡಿಸಲಾಗುತ್ತದೆ. ಆದ್ದರಿಂದ ಆ ದಿನದಂದು ಎಲ್ಲರೂ ಮತಗಟ್ಟೆಗೆ ಹೋಗಿ ಮತದಾನ ಮಾಡಬೇಕು ಎಂದು ತಿಳಿಸಿದರು. ಕೊನೆಯಲ್ಲಿ ಮತದಾನ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳಾದ ಲಿಂಕ್‌ವರ್ಕರ್ ಶ್ರೀನಿವಾಸ, ಡಿ.ಇ.ಓ. ಯಲ್ಲಪ್ಪ, ಪ್ರಾ.ಆ.ಸು ಸವಿತಾ, ಆಶಾ ಕಾರ್ಯಕರ್ತೆಯರಾದ ರೇಣುಕಾ, ಶೃತಿ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಹಕ್ಕಿ–ಪಿಕ್ಕಿ ಸಮುದಾಯದ ಮುಂಖಡರು, ಇತರರು ಭಾಗವಹಿಸಿದ್ದರು.

ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೊಪ್ಪಳ ಏಪ್ರಿಲ್ 16 : 2024–25 ನೇ ಸಾಲಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಜಿಲ್ಲೆಯಲ್ಲಿ ನರ್ವಹಣೆಯಾಗುತ್ತಿರುವ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಗಳಲ್ಲಿ 6ನೇ ತರಗತಿಯ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿಯನ್ನು ವಿಸ್ತರಿಸಲಾಗಿದೆ.ಪ್ರತಿ ಶಾಲೆಯಲ್ಲಿ ದಾಖಲಾತಿ 60 ಸೀಟುಗಳು ಮಾತ್ರ ಇದ್ದು, ಪೋಷಕರು/ವಿದ್ಯಾರ್ಥಿಗಳು ನೇರವಾಗಿ ಎಲ್ಲಾ ದಾಖಲೆಗಳೊಂದಿಗೆ ಆಯಾ ಮೌಲಾನಾ ಆಜಾದ್ ಶಾಲೆಯ ಮುಖ್ಯೋಪಾಧ್ಯಾಯರಿಗೆ ಸಂಪರ್ಕಿಸಿ ಮೇ 15 ರೊಳಗೆ ಅರ್ಜಿ ಸಲ್ಲಿಸಬೇಕು.

ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆ, ಸರ್ದಾರಗಲ್ಲಿ, ಕೊಪ್ಪಳ – 9900617290, ದಿಡ್ಡಿಕೇರಾ ಓಣಿ, ಕೊಪ್ಪಳ–9900617290, ಮುನರಾಬಾದ್ ? 9902168996, ಲಕ್ಷಿ ?ಮೇ ಕ್ಯಾಂಪ್, ಗಂಗಾವತಿ ? 9880026927, ಕನಕಗಿರಿ–9611024212, ಕಾರಟಗಿ ? 8073548574, ತಾವರಗೇರಾ ? 8746812318, ಯಲಬುರ್ಗಾ ? 6363331628, ಕುಕನೂರು ? 7829041942, ಶ್ರೀರಾಮನಗರ–9880026927 ಶಾಲೆಗಳಿಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದು.ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಡಾ॥ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಶೇ.75 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು ಶೇ.25 ಇತರೆ ವರ್ಗದವರಿಗೆ ಮೀಸಲಿಡಲಾಗಿದೆ. ಅಲ್ಪಸಂಖ್ಯಾತರ ವರ್ಗದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ ಹಾಗೂ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮಿತಿಯೊಳಗಿರಬೇಕು. ಹಿಂದುಳಿದ ವರ್ಗಗಳ 2ಎ, 3ಎ ಮತ್ತು 3ಬಿ ಅಭ್ಯರ್ಥಿಗಳ ಹಾಗೂ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮಿತಿಯೊಳಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮಿತಿಯೊಳಗಿರಬೇಕು. ಅಂಗವಿಕಲ ವಿದ್ಯಾರ್ಥಿಗಳಿಗೆ ಶೇ.05, ಮಾಜಿ ಸೈನಿಕರಿಗೆ ಶೇ. 04 ಕಾಯ್ದಿರಿಸಲಾಗಿದೆ. ವಿಶೇಷ ದುರ್ಬಲ ವರ್ಗ ಶೇ.05, ಸಫಾಯಿ ಕರ್ಮಚಾರಿ ವಿದ್ಯಾರ್ಥಿಗಳಿಗೆ ಶೇ. 05 ಕಾಯ್ದಿರಿಸಲಾಗಿದೆ.ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು 5 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಭರ್ತಿ ಮಾಡಿದ ಅರ್ಜಿಯೊಂದಿಗೆ ಕಂದಾಯ ಇಲಾಖೆಯ ತಹಶೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ವಿದ್ಯಾರ್ಥಿ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಮತ್ತು ನಗದಿ ಪಡಿಸಿದ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಅಪೂರ್ಣವಾದ ಮತ್ತು ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಹತ್ತಿರದ ಮೌಲಾನಾ ಆಜಾದ್ ಮಾದರಿ ಶಾಲೆ/ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಅಥವಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಪ್ಪಳ ದೂ.ಸಂ: 08539–225070 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿತ್ರಕಲೆಯೆನ್ನುವುದು ಜಾತಿ ಮತ ಪಂತವನ್ನು ಮೀರಿದ್ದು : ಡಾ. ಪಿ.ಜಿ. ಕೆಂಪಣ್ಣವರ

ಬೆಳಗಾವಿ :– ಚಿತ್ರಕಲಾಕ್ಷೇತ್ರಕ್ಕೆ ಜಾತಿ, ಮತ, ಪಂತ ಎಂಬುದಿರುವುದಿಲ್ಲ. ಕಲೆಯೆನ್ನುವುದು ಅವುಗಳನ್ನೆಲ್ಲ ಮೀರಿ ನಂತಿದೆ. ಕಲೆಗೆಂದೂ ಸೋಲಿಲ್ಲ. ಸರ್ಕಾರ ಕಲಾವಿದರನ್ನು ಗುರುತಿಸಲು ವಿಫಲವಾದಾಗ ಇಂಥ ಸಂಘ ಸಂಸ್ಥೆಗಳು ಅವರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತವೆ. ಇದೊಂದು ಅಭಿಮಾನದ ಸಂಗತಿ. ಎಲೆಮರೆ ಕಾಯೆಯಂತಿರುವ ಕಲಾವಿದರನ್ನು ಬೆಳಕಿಗೆ ತರುತ್ತಿರುವ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರಿ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ನವೃತ್ತ ಉಪನ್ಯಾಸಕರಾದ ಡಾ, ಪಿ. ಜಿ. ಕೆಂಪಣ್ಣವರ ಇಂದಿಲ್ಲಿ ಹೇಳಿದರು.

ಬೆಳಗಾವಿಯ ತಿಲವಾಡಿಯ ಎರಡನೇ ರೇಲ್ವೆಗೇಟ್ ಹತ್ತಿರವಿರುವ ಕಲಾಮಹರ್ಷಿ ಕೆ. ಬಿ. ಕುಲಕರ್ಣಿ ಆರ್ಟ ಗ್ಯಾಲರಿ (ವಾರೇಕರ ನಾಟ್ಯ ಸಂಘ) ಸಭಾ ಭವನದಲ್ಲಿ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರಿ ಸಂಘಟನೆಯವರಿಂದ ಇದೇ ದಿ. 14 ಮತ್ತು 15 ಎರಡು ದಿನಗಳ ಕಾಲ ರಾಷ್ಟ್ರಮಟ್ಟದ ಕಲಾ ಪ್ರದರ್ಶನ ಉದ್ಘಾಟನೆ, ಚಿತ್ರಕಲಾ ಪ್ರದರ್ಶನ ಮತ್ತು ಮಕ್ಕಳ ಚಿತ್ರಗಳ ಆಯ್ಕೆ–ಸ್ಪರ್ಧೆ ವರ್ಣಕಲಾ ಪ್ರಶಸ್ತಿ ಪ್ರದಾನ 2023–24 ಜರುಗಿದವು. ವರ್ಣಕಲಾಶ್ರೀ ಪ್ರಶಸ್ತಿ ಪ್ರದಾನ ಮಾಡಿದ ಡಾ. ಕೆಂಪಣ್ಣವರ ಮೇಲಿನಂತೆ ಅಭಿಪ್ರಾಯ ಪಟ್ಟರು.

ಮುಂದೆ ಮಾತನಾಡುತ್ತ ಡಾ. ಕೆಂಪಣ್ಣವರ ಅವರು, ಚಿತ್ರಕಲಾ ಕ್ಷೇತ್ರದಲ್ಲಿ ಬೆಳಗಾವಿಯದ್ದು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಚಂದ್ರಕಾಂತ ಕುಸನೂರ, ಕೆ. ಬಿ. ಕುಲಕರ್ಣಿ ಮುಂತಾದವರು ಈ ಕ್ಷೇತ್ರದಲ್ಲ ವಿಶೇಷವಾದ ಕೆಲಸವನ್ನು ಮಾಡಿದ್ದಾರೆ ಆ ಪರಂಪರೆಯನ್ನು ನಗರದ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ ಗ್ಯಾಲರ್ ಯವರು ಮುಂದರೆವರಸಿಕೊಂಡು ಹೋಗುತ್ತಿರುವುದು ಸಂತೋಷದ ಸಂಗತಿ.

2023–24 ನೇ ಸಾಲಿನ ವರ್ಣಕಲಾಶ್ರೀ ಪ್ರಶಸ್ತಿಗೆ ಭಾಜನರಾದ ಗಣೇಶ ದೊಡಮನ, ಸಚ್ಚಿನ ಉಪಾಧ್ಯೆ, ಚಂದ್ರಶೇಖರ ಯಡ್ರಾಮಿ, ರಮೇಶ ಸಾಸನೂರ, ರಾಜಕುಮಾರ ಯಲಸ್ಕಂಗಿಕರ, ಅಜಿತ ಹುಲಮನ ಮತ್ತು ವಿಶ್ವಕಲಾ ಕಲಾದಿನ ಪ್ರಶಸ್ತಿ ಪುರಸ್ಕೃತರಾದ ಅತಿಫ್ ಪಾಚಾಪುರಿ ರನ್ನು ಶಾಲು ಹೊದಿಸಿ, ಹಾರ ಹಾಕಿ, ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಅಂತರರಾಷ್ಟ್ರೀಯ ಕಲಾವಿದರಾದ ಡಾ, ವಿಜಯ ಹಗರಗುಂಡಗಿಯವರು ಸಮಾರಂಭವನ್ನು ಉದ್ಘಾಟಿಸದರು. ಹಿರಿಯ ಚಿತ್ರಕಲಾವಿದರಾದ ಜಗಧೀಶ ಕುಂಟೆ, ಸುಭಾಷ ದೇಸಾಯಿ, ಅತಿಥಿಗಳಾಗಿ ಆಗಮಿಸಿದ್ದರು. ಸಂಘದ ಅಧ್ಯಕ್ಷರಾದ ನಾಗೇಶ ಚಿಮರೊಲ, ಕಾರ್ಯದರ್ಶಿ ಸಂತೋಷ ಮಲ್ಲೊಳ್ಳಿ, ರವೀಂದ್ರ ಹೋಮಕರ, ಭಾಸ್ಕರ ಪಾಟೀಲ, ಸುಶೀಲ ತರಬರ, ಭರಮಣ್ಣ ವೇತಾಳ, ರೇಹಮತುಲ್ಲಾಹ ಶಿಂದೊಳಕರ, ಸ್ವೇತಾ ಪಾಟೀಲ, ಕೇಶವ್ವಾ ಎಸ್. ವಾಲಿ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ದಿಲೀಪಕುಮಾರ ಕಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ದೇಮಣ್ಣ ಕಟಂಬಳೆ ನರೂಪಿಸಿದರು.

ಕೊಣ್ಣೂರು ಚೆಕ್ ಪೊಸ್ಟ್‌ಗೆ ನರಗುಂದ ತಹಶೀಲ್ದಾರ ಹಾಗೂ ಇಒ ಭೇಟಿ

ಗದಗ ಏಪ್ರಿಲ್ 16: ಲೋಕಸಭೆ ಚುನಾವಣೆ ಹಿನ್ನಲೆ ತಾಲೂಕಿನ ಕೊಣ್ಣೂರು ಮತ್ತು ಕಲಕೇರಿ ಚೆಕ್ ಪೊ?ಸ್ಟ್ ಗಳಲ್ಲಿ ಚುನಾವಣೆ ಅಕ್ರಮ ತಡೆಗಟ್ಟಲು ತಾಲೂಕು ಆಡಳಿತ ಮತ್ತು ಚುನಾವಣೆ ಅಧಿಕಾರಿಗಳು ಹದ್ದಿನ ಕಣ್ಣು ಇಟ್ಟಿದ್ದಾರೆ. ಪ್ರತಿನಿತ್ಯ ಚೆಕ್ ಪೊ?ಸ್ಟ್ ಗಳಿಗೆ ಭೇಟಿ ನೀಡುತ್ತಿರುವ ಚುನಾವಣೆ ಅಧಿಕಾರಿಗಳು ಅಕ್ರಮ ತಡೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದ್ದಾರೆ.

ನರಗುಂದ ತಹಶೀಲ್ದಾರ ಶ್ರೀಶೈಲ್ ತಳವಾರ ಹಾಗೂ ನರಗುಂದ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲೂಕಿನ ಮಾದರಿ ನೀತಿ ಸಂಹಿತೆಯ ನೋಡಲ್ ಅಧಿಕಾರಿಗಳು ಆದ ಸೋಮಶೇಖರ್ ಬಿರಾದರ್ ಅವರುಗಳು ಕೊಣ್ಣೂರು ಚೆಕ್ ಪೊ?ಸ್ಟ್ ಗೆ ಬೇಟಿ ನೀಡಿ ಪರಿಶೀಲನೆ ನ